ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಎಡಿಎಂ2(4)ಸುತ್ತೋಲೆ/49/2019-20 ದಿನಾಂಕ 30.09.2019

## ಸುತ್ತೋಲೆ

ವಿಷಯ: ಶಾಲಾ ಆವರಣವನ್ನು Single Use Plastic ಏಕ ಬಳಕೆ ಪ್ಲಾಸ್ಟಿಕ್ ಮುಕ್ತಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ:1. ಭಾರತ ಸರ್ಕಾರದ ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ನವದೆಹಲಿರವರ ಪತ್ರ ಸಂಖ್ಯೆ: 27-14/2019-15-9 ದಿನಾಂಕ: 21/08/2019.

2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆರವರ ಟಿಪ್ಪಣಿ ದಿನಾಂಕ: 21.08.2019.

*******

ಭಾರತದ ಮಾನ್ಯ ಪ್ರಧಾನ ಮಂತ್ರಿಗಳು 73ನೇ ಸ್ವಾತಂತ್ರ್ಯದಿನೋತ್ಸವದ ಸಂದರ್ಭದಲ್ಲಿ ರಾಷ್ಟ್ರವನ್ನು ಪ್ಲಾಸ್ಟಿಕ್ ಬಳಕೆ ಮುಕ್ತ ಭಾರತವನ್ನಾಗಿ ನಿರ್ಮಿಸುವುದಾಗಿ ಘೋಷಿಸಿರುತ್ತಾರೆ.

ಇಂದಿನ ಜನಾಂಗವು ಪ್ಲಾಸ್ಟಿಕ್ ಬಳಕೆಗೆ ಮಾರುಹೋಗುತ್ತಿದ್ದಾರೆ ಇದರಿಂದಾಗಿ ಅತೀ ಹೆಚ್ಚು ಪ್ರಮಾಣದ ಪ್ಲಾಸ್ಟಿಕ್ ಮಣ್ಣನ್ನು ಸೇರಿ ಕೊಳಯದೇ ಕ್ರಮೇಣ ಸಂಪೂರ್ಣ ಪರಿಸರವನ್ನೇ ಹಾನಿಗೊಳಪಡಿಸುತ್ತಿದೆ.

ಪ್ಲಾಸ್ಟಿಕ್ ಒಂದು ವಿಷಕಾರಿ ವಸ್ತು ಇದರ ವಿಲೇವಾರಿ ಬಹಳ ಕಠಿಣ ಇಂತಹ ವಸ್ತುಗಳತ್ತ ಜನಸಾಮಾನ್ಯರಲ್ಲಿ ಒಲವಿರುವುದು ಚಿಂತಿಸಬೇಕಾದ ಸಂಗತಿಯಾಗಿದೆ. ಇದು ಪರಿಸರಕ್ಕೆ ಮಾರಕವಲ್ಲದೆ ಮಾನವರಲ್ಲಿ ಜಾನುವಾರುಗಳಲ್ಲಿ ಪಶು-ಪಕ್ಷಿಗಳಲ್ಲಿ ಅನೇಕ ರೋಗ-ರುಜಿನಗಳಿಗೆ ಕಾರಣವಾಗುತ್ತಿದೆ. ಪ್ಲಾಸ್ಟಿಕ್‌ನಿಂದಾಗಿ ಜಾನುವಾರುಗಳು ಪ್ರತೀ ವರ್ಷ ಅನಾರೋಗ್ಯಕ್ಕೀಡಾಗಿ ಸಾವು ಸಂಭವಿಸುತ್ತಿರುವ ಪ್ರಕರಣಗಳು ಹೆಚ್ಚುತ್ತಾ ಹೋಗುತ್ತಿದೆ. ಇದು ಹೀಗೆ ಮುಂದುವರೆದರೆ ಪರಿಸರ ವ್ಯವಸ್ಥೆಯೇ ಹಾಳಾಗಿ ಜೀವ ಸಂಕುಲ ನಾಶವಾಗುತ್ತದೆ. ಇಂತಹ ಭಯಂಕರ ಪ್ಲಾಸ್ಟಿಕ್ ಭೂತವನ್ನು ನಿರ್ಮೂಲನೆಗೊಳಿಸಲು ಸರ್ಕಾರವು ಅನೇಕ ಯೋಜನೆಗಳನ್ನು ರೂಪಿಸುತ್ತಿದೆಯಾದರೂ ನಿರೀಕ್ಷಿತ ಪ್ರಮಾಣದಲ್ಲಿ ಯಶಸ್ವಿಯಾಗಿರುವುದಿಲ್ಲ. ಇಂತಹ ಸೂಕ್ಷ್ಮ ವಿಚಾರವನ್ನು ವಿದ್ಯಾರ್ಥಿ ದೆಸೆಯಲ್ಲಿ ರೂಢಿಸಿಕೊಂಡಲ್ಲಿ ಭವಿಷ್ಯದ ಭಾವಿ ಪ್ರಜೆಗಳಲ್ಲಾದರೂ ನಿರೀಕ್ಷಿತ ಮಟ್ಟದಲ್ಲಿ ಯಶಸ್ಸು ಸಾಧಿಸಬಹುದಾಗಿದೆ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಪ್ಲಾಸ್ಟಿಕ್ ನಿಷೇಧದ ಕುರಿತು ಅರಿವು ಮೂಡಿಸಿ ಶಾಲೆಯ ಆವರಣದ ಒಳಗೆ ಮತ್ತು ಹೊರಗೆ ಪ್ಲಾಸ್ಟಿಕ್ ಮುಕ್ತ ವಾತಾವರಣ ನಿರ್ಮಿಸಲು ಸಿದ್ಧಗೊಳಿಸಬೇಕಿದೆ.

ನೀರು ಮತ್ತು ಒಳಚರಂಡಿ ಸರಬರಾಜು ನಳಿಕೆಗಳಲ್ಲಿ ಪ್ಲಾಸ್ಟಿಕ್ ತ್ಯಾಜ್ಯಗಳೂ ಸಿಲುಕಿಕೊಂಡು ಸಾರ್ವಜನಿಕ ಜನಜೀವನಕ್ಕೆ ಧಕ್ಕೆಯುಂಟುಮಾಡುತ್ತಿದೆ. ಈ ನಿಟ್ಟಿನಲ್ಲಿ ಒಂದೇ ಬಳಕೆಯ ಪ್ಲಾಸ್ಟಿಕನ್ನು(Single-use plastic) ಸಹ ಸಂಪೂರ್ಣವಾಗಿ ನಿಲ್ಲಿಸಿ, ಭಾರತವನ್ನು ಪ್ಲಾಸ್ಟಿಕ್ ಬಳಕೆ ಮುಕ್ತತೆಯೆಡೆಗೆ ಕೊಂಡೊಯ್ಯುವ ಸಲುವಾಗಿ ದಿನಾಂಕ: 02.10.2019ರ ಗಾಂಧೀಜಿಯವರ 150ನೇ ಜನ್ಮದಿನಾಚರಣೆಯ ಅಂಗವಾಗಿ ರಾಷ್ಟ್ರವ್ಯಾಪಿ ಅಭಿಯಾನ ಹಮ್ಮಿಕೊಳ್ಳುವುದಾಗಿ ತಿಳಿಸುತ್ತಾ, ಈ ಬಗ್ಗೆ ಶಾಲೆಗಳಲ್ಲಿ ಜಾಗೃತಿ ಮೂಡಿಸಲು ಅಗತ್ಯ ನಿರ್ದೇಶನ ನೀಡುವಂತೆ ಉಲ್ಲೇಖ(1)ರ ಪತ್ರದಲ್ಲಿ ಸೂಚಿಸಿದೆ. ಉಲ್ಲೇಖ(2)ರಲ್ಲಿ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳೂ ಸಂಬಂಧಪಟ್ಟ ಶಾಲೆಗಳಿಗೆ ತಲುಪಿಸಲು ಅಗತ್ಯ ಕ್ರಮವಹಿಸುವಂತೆ ಸೂಚಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಶಾಲೆಗಳ ಮಕ್ಕಳಿಗೆ ಶಾಲೆಯ ಒಳಗೆ ಮತ್ತು ಹೊರಗೆ ಏಕ ಬಳಕೆ ಪ್ಲಾಸ್ಟಿಕ್‌ಗಳನ್ನು ನಿಷೇಧಿಸಲು ಸೂಚನೆಗಳನ್ನು ನೀಡುವುದು. ಈ ಕಾರ್ಯಕ್ರಮಕ್ಕೆ ಪೂರಕವಾಗಿ ಜಾಥಾಗಳನ್ನು ಆಯೋಜಿಸುವುದು, ಬೀದಿ ನಾಟಕಗಳ ಪ್ರದರ್ಶನ, ಏಕ ಬಳಕೆಯ ಪ್ಲಾಸ್ಟಿಕ್ ನಿಷೇಧ ಎಂಬ ನಾಮಫಲಕಗಳನ್ನು ಶಾಲಾ ಆವರಣದಲ್ಲಿ ಪ್ರದರ್ಶಿಸುವುದು, ವಿದ್ಯಾರ್ಥಿಗಳಿಂದ ಪ್ರತಿಜ್ಞಾ ಸ್ವೀಕಾರ ಮಾಡಿಸುವುದು ಹಾಗೂ ಪ್ಲಾಸ್ಟಿಕ್‌ನ ಪರ್ಯಾಯ ವಸ್ತುಗಳನ್ನು ಬಳಕೆಗೆ ಉತ್ತೇಜಿಸುವುದು ಇತ್ಯಾದಿಗಳನ್ನು ಆಯೋಜಿಸುವುದು.

ದಿನಾಂಕ:02.10.2019ರ ಗಾಂಧೀ ಜಯಂತಿ ದಿನದಂದು ಈ ಕಾರ್ಯಕ್ರಮವನ್ನು ಆಯೋಜಿಸಿ ನಿರಂತರವಾಗಿ ಅನುಷ್ಠಾನಗೊಳಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದೆ.

ನಿರ್ದೇಶಕರು(ಪ್ರಾಥಮಿಕ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಸಂಬಂಧಪಟ್ಟ ಉಪನಿರ್ದೇಶಕರುಗಳ ಮುಖಾಂತರ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿ ಕಟ್ಟಡ, ಬೆಂಗಳೂರರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರಶಿಕ್ಷಣ ಅಭಿಯಾನ, ನೃಪತುಂಗರಸ್ತೆ, ಬೆಂಗಳೂರುರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಅಪರ ಆಯುಕ್ತರು, ಕಲಬುರಗಿ ಮತ್ತು ಧಾರವಾಡ ಆಯುಕ್ತಾಲಯ, ಧಾರವಾಡ/ಕಲಬುರಗಿ.
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರು/ಸಹನಿರ್ದೇಶಕರು/ಜಂಟಿನಿರ್ದೇಶಕರಿಗೆ ಮಾಹಿತಿಗಾಗಿ.
5. ಕಛೇರಿ ಪ್ರತಿ.